# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 768(904) |
| ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ), (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24-08-2026 |
| ಉತ್ತರಿಸುವವರು | ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಕೊಡಗು ಜಿಲ್ಲೆಯ ಅರಣ್ಯ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸಿಬ್ಬಂದಿ ಕೊರತೆಯಿಂದ ಅರಣ್ಯ ಸಂರಕ್ಷಣಾ ಕಾರ್ಯಕ್ಕೆ ತೊಂದರೆಯಾಗುತ್ತಿದೆಯೇ;</td><td>ಕೊಡಗು ವೃತ್ತದ ಅರಣ್ಯ ಇಲಾಖೆಯಲ್ಲಿ ಮಂಜೂರಾದ ಹುದ್ದೆ ಮತ್ತು ಖಾಲಿಯಿರುವ ಹುದ್ದೆಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.<br>ಕೊಡಗು ಜಿಲ್ಲೆಯ ಅರಣ್ಯ ಇಲಾಖೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಖಾಲಿ ಹುದ್ದೆಗಳ ಎದುರಾಗಿ ಹೆಚ್ಚುವರಿ/ಭಾಗಶಃ ಪ್ರಭಾರವನ್ನು ನೀಡಿ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು, ಆಡಳಿತ ವ್ಯವಸ್ಥೆಯನ್ನು ಕುಂಠಿತವಾಗದಂತೆ ಸಮನ್ವಯತೆಯೊಂದಿಗೆ ನಿರ್ವಹಿಸಲಾಗುತ್ತಿದೆ.</td></tr>
<tr><td>(ಆ)</td><td>ಕೊಡಗು ಜಿಲ್ಲೆಯಲ್ಲಿ ಆನೆ, ಹುಲಿ ಸೇರಿದಂತೆ ಪ್ರಮುಖ ವನ್ಯಜೀವಿಗಳ ಇತ್ತೀಚಿನ ಗಣತಿ ಪ್ರಕಾರ ಸಂಖ್ಯೆ ಎಷ್ಟಿದೆ; ಕಳೆದ ಗಣತಿಗೆ ಹೋಲಿಸಿದರೆ ಅವುಗಳ ಸಂಖ್ಯೆಯಲ್ಲಿ ಏರಿಕೆ ಅಥವಾ ಇಳಿಕೆ ಕಂಡು ಬಂದಿದೆಯೇ;</td><td>ರಾಜ್ಯದಲ್ಲಿ ಪ್ರತಿ 05 ವರ್ಷಗಳಿಗೊಮ್ಮೆ ಆನೆ ಗಣತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.<br><br>ಕೊಡಗು ವೃತ್ತ ವ್ಯಾಪ್ತಿಗೆ ಒಳಪಡುವ ವಿಭಾಗಗಳಲ್ಲಿ ಕೈಗೊಂಡ ಆನೆ ಗಣತಿ ಮಾಹಿತಿಯು ಈ ಕೆಳಗಿನಂತಿದೆ.<br>
<table>
<tr><th>ಕ್ರ. ಸಂ</th><th>ವಿಭಾಗ</th><th>2012</th><th>2023</th><th>ಷರಾ</th></tr>
<tr><td colspan="5">ಆನೆ ಗಣತಿ</td></tr>
<tr><td>1</td><td>ಮಡಿಕೇರಿ</td><td>64</td><td>214</td><td rowspan="4">ಆನೆ ಗಣತಿಯಂತೆ ಏರಿಕೆ ಕಂಡು ಬಂದಿರುತ್ತದೆ. (ನಾಗರಹೊಳೆ ವಿಭಾಗಕ್ಕೆ ಸಂಬಂಧಿಸಿದಂತೆ ಮೈಸೂರು ಮತ್ತು ಕೊಡಗು ಪ್ರದೇಶ ಸೇರಿರುತ್ತದೆ)</td></tr>
<tr><td>2</td><td>ವಿರಾಜಪೇಟೆ</td><td>65</td><td>58</td></tr>
<tr><td>3</td><td>ನಾಗರಹೊಳೆ</td><td>619</td><td>831</td></tr>
<tr><td>4</td><td>ಮಡಿಕೇರಿ ವನ್ಯಜೀವಿ</td><td>74</td><td>113</td></tr>
<tr><td></td><td>ಒಟ್ಟು</td><td>822</td><td>1216</td><td></td></tr>
</table>
<br>2017 ರ ಆನೆ ಗಣತಿ ಕಾರ್ಯದಲ್ಲಿ ಪ್ರತಿ ಚದರ ಕಿ.ಮೀ. ನಲ್ಲಿ ಕಂಡುಬರುವ ಆನೆಯ ಸಾಂದ್ರತೆ ವಿವರವು ಮಾತ್ರವೇ ಲಭ್ಯವಿದ್ದು, ಕೊಡಗು ವೃತ್ತ ವ್ಯಾಪ್ತಿಗೆ ಒಳಪಡುವ ವಿಭಾಗಗಳಲ್ಲಿನ ಮಾಹಿತಿಯು ಈ ಕೆಳಗಿನಂತಿದೆ.</td></tr>
</table>

| ಕ್ರ ಸಂ | ವಿಭಾಗ | Elephant Density/ $km^2$ |
|---|---|---|
| 1 | ನಾಗರಹೊಳೆ ಹು.ಸಂ.ಪ್ರ. | **1.54** |
| 2 | ಮಡಿಕೇರಿ ವನ್ಯಜೀವಿ | **0.24** |

ರಾಜ್ಯದಲ್ಲಿ ಪ್ರತಿ 04 ವರ್ಷಗಳಿಗೊಮ್ಮೆ ಹುಲಿ ಗಣತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಹಾಗೂ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಪ್ರತಿ ವರ್ಷವೂ ಗಣತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಕೊಡಗು ವೃತ್ತ ವ್ಯಾಪ್ತಿಗೆ ಒಳಪಡುವ ವಿಭಾಗಗಳಲ್ಲಿ ಕೈಗೊಂಡ ಹುಲಿ ಗಣತಿ ಮಾಹಿತಿಯು ಈ ಕೆಳಗಿನಂತಿದೆ.

| ಕ್ರ. ಸಂ | ವಿಭಾಗ | 2018 | 2022 | 2025 | ಷರಾ |
|---|---|---|---|---|---|
| **ಹುಲಿ ಗಣತಿ** | | | | | |
| 1 | ಮಡಿಕೇರಿ | 10 | 10 | ಗಣತಿ ಕಾರ್ಯ ಪೂರ್ಣಗೊಂಡಿದ್ದು, ಜಿಲ್ಲಾವಾರು ಹುಲಿ ಗಣತಿಯನ್ನು ಪ್ರಕಟಿಸಲಾಗಿರುವುದಿಲ್ಲ. | ಹುಲಿ ಗಣತಿಯಂತೆ ವರ್ಷಾವಾರು ಏರಿಕೆ ಕಂಡು ಬಂದಿರುತ್ತದೆ |
| 2 | ವಿರಾಜಪೇಟೆ | 09 | 03 | | |
| 3 | ನಾಗರಹೊಳೆ | 125 | 140 | | |
| 4 | ಮಡಿಕೇರಿ ವನ್ಯಜೀವಿ | 10 | 10 | | |
| | **ಒಟ್ಟು** | **154** | **163** | | |

(ನಾಗರಹೊಳೆ ವಿಭಾಗಕ್ಕೆ ಸಂಬಂಧಿಸಿದಂತೆ ಮೈಸೂರು ಮತ್ತು ಕೊಡಗು ಪ್ರದೇಶ ಸೇರಿರುತ್ತದೆ)

2024ರಲ್ಲಿ ಕೊಡಗು ವೃತ್ತ ವ್ಯಾಪ್ತಿಯ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಸಸ್ಯಾಹಾರಿ ವನ್ಯಪ್ರಾಣಿಗಳ ಗಣತಿಯಲ್ಲಿ ಅಂದಾಜಿಸಲಾದ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ | ವನ್ಯಪ್ರಾಣಿಗಳು | ಸಂಖ್ಯೆ |
|---|---|---|
| 1 | ಜಿಂಕೆ | 56802 |
| 2 | ಕಡವೆ | 4703 |
| 3 | ಕಾಟಿ | 1326 |
| 4 | ಕಾಡುಹಂದಿ | 4112 |
| 5 | ಕಾಡುಕುರಿ | 5137 |

| | | |
|---|---|---|
| (ಇ) | ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಿರುವ ಪ್ರದೇಶಗಳಿಂದ ಸಮಸ್ಯೆ ಉಂಟು ಮಾಡುತ್ತಿರುವ ವನ್ಯಜೀವಿಗಳನ್ನು ಹಿಡಿದು ಸ್ಥಳಾಂತರಿಸುವ ಅಥವಾ ನಿಯಂತ್ರಿಸುವ ಕುರಿತು ಸರ್ಕಾರ ಯಾವುದಾದರೂ ಯೋಜನೆ ರೂಪಿಸಿದೆಯೇ? | ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಿರುವ ಪ್ರದೇಶಗಳಲ್ಲಿ ಉಪಟಳಕ್ಕೆ ಕಾರಣವಾಗಿರುವ ವನ್ಯಜೀವಿಗಳನ್ನು ಸೆರೆ ಹಿಡಿದು ಸ್ಥಳಾಂತರಿಸುವ ಅಥವಾ ನಿಯಂತ್ರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಪ್ರಮಾಣಿತ ಕಾರ್ಯ ವಿಧಾನ (SOP) ಗಳನ್ವಯ ಸೆರೆಹಿಡಿದು ವನ್ಯಜೀವಿ ಪಶುವೈದ್ಯಾಧಿಕಾರಿಗಳ ಸಲಹೆ ಮೇರೆಗೆ ಸದರಿ ಕಾಡಾನೆಯ ಸೂಕ್ತ ಅರಣ್ಯ ಆವಾಸಸ್ಥಾನಕ್ಕೆ ಅಥವಾ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗುತ್ತಿದೆ. |

| | | |
|---|---|---|
| | | • ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸ್ಯಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.<br><br>• ಅರಣ್ಯೇತರ ಮಾನವ ವಸತಿ ಪ್ರದೇಶಗಳಲ್ಲಿ ಕಾಣಿಸಿಕೊಂಡು ಮಾನವ-ಹುಲಿ ಸಂಘರ್ಷಕ್ಕೆ ಕಾರಣವಾಗುವ ಹುಲಿಯನ್ನು ನುರಿತ ಕುಮ್ಕಿ ಸಾಕಾನೆಗಳನ್ನು ಉಪಯೋಗಿಸಿಕೊಂಡು ಮರಳಿ ಅರಣ್ಯ ಪ್ರದೇಶಕ್ಕೆ ಹಿಮ್ಮೆಟ್ಟಿಸುವ ಕಾರ್ಯಾಚರಣೆಗಳನ್ನು ಕೈಗೊಳ್ಳಲಾಗುತ್ತಿದೆ.<br><br>• ಹುಲಿಯನ್ನು ಮರಳಿ ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಸಾಧ್ಯವಾಗದೇ ಇರುವ ಸಂದರ್ಭಗಳಲ್ಲಿ, ಅಂತಹ ಮಾನವ-ಹುಲಿ ಸಂಘರ್ಷಕ್ಕೆ ಕಾರಣವಾದ ಹುಲಿಯನ್ನು ನಿರ್ದಿಷ್ಟವಾಗಿ ಗುರುತಿಸಿ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ಮಾರ್ಗಸೂಚಿಗಳನ್ವಯ ಸೆರೆಹಿಡಿದು, ವನ್ಯಜೀವಿ ಪಶುವೈಧ್ಯಾಧಿಕಾರಿಗಳ ಸಲಹೆಯ ಮೇರೆಗೆ ಪುನರ್ವಸತಿ ಕೇಂದ್ರ/ ಸೂಕ್ತ ಅರಣ್ಯ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br><br>• ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br><br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ:01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ:30.06.2023 ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ:18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾಗೂ ದಿನಾಂಕ: 02-03-2026ರ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತು ದಿನಾಂಕ: 02-03-2026ರ ಆದೇಶದಲ್ಲಿ ಶೃಂಗೇರಿ-ಕೊಪ್ಪ ಆನೆ ಕಾರ್ಯಪಡೆಯನ್ನು ಸ್ಥಾಪಿಸಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ **10 ಆನೆ ಕಾರ್ಯಪಡೆ (Elephant Task Force)** ನ್ನು ರಚಿಸಲಾಗಿರುತ್ತದೆ. |

| | | |
|---|---|---|
| | | **ಚಿರತೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ: 31.01.2023ರ ಆದೇಶದಲ್ಲಿ, ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು ಇವರ ನೇತೃತ್ವದಲ್ಲಿ **ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ**.<br><br>• ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br><br>• ಆನೆಗಳು ಮತ್ತು ಇತರೆ ವನ್ಯಪ್ರಾಣಿಗಳು ಒಂದು ಅರಣ್ಯ ಪ್ರದೇಶದಿಂದ ಇನ್ನೊಂದು ಅರಣ್ಯ ಪ್ರದೇಶಕ್ಕೆ ಅಡೆತಡೆ ಇರದಂತೆ ಸಂಚರಿಸಲು ಅನುಕೂಲವಾಗುವಂತೆ ವನ್ಯಜೀವಿ ಕಾರಿಡಾರ್ (Wildlife Corridor) ಅನುಷ್ಠಾನಗೊಳಿಸಬೇಕಾಗಿರುತ್ತದೆ, ಇದಕ್ಕಾಗಿ ತಯಾರಿಸಿರುವ ವನ್ಯಜೀವಿ ಕಾರಿಡಾರ್ (Wildlife Corridor) ಪಾಲಿಸಿಯು ಪರಿಶೀಲನೆಗಾಗಿ ಸರ್ಕಾರದ ಹಂತದಲ್ಲಿರುತ್ತದೆ.<br>• ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.<br>• ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br><br>• ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br><br>• ಸಿಬ್ಬಂದಿಗಳು ಅರಣ್ಯದೊಳಗೆ ಹಾಗೂ ಅರಣ್ಯದಂಚಿನಲ್ಲಿ ನಿರಂತರ ಗಸ್ತು ಕಾರ್ಯ ಕೈಗೊಂಡು ಅಕ್ರಮ ಚಟುವಟಿಕೆಗಳನ್ನು ತಡೆಯುವುದರ ಜೊತೆಗೆ ವನ್ಯಜೀವಿಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ. |

| | | |
|---|---|---|
| | | **ತಂತ್ರಜ್ಞಾನ ಬಳಕೆ:**<br>• ಮಾನವ- ಆನೆ ಸಂಘರ್ಷ ಹೆಚ್ಚಿರುವ 10 ಜಿಲ್ಲೆಗಳಲ್ಲಿ **"ಆನೆ ಎಲ್ಲಿ"** ಎಂಬ ತಂತ್ರಜ್ಞಾನ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಸಾರ್ವಜನಿಕ ದೂರುಗಳು, ಗಸ್ತು ತಿರುಗುವಿಕೆ ಮುಂತಾದ ವಿವಿಧ ಮಾಹಿತಿಗಳ ಮೂಲಕ ಒಂದು ಪ್ರದೇಶದಲ್ಲಿ ಆನೆಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡುತ್ತದೆ. ಈ ಮಾಹಿತಿಯು ಆನೆಗಳ ಚಲನವಲನದ ಮಾದರಿಯನ್ನು ಪತ್ತೆಹಚ್ಚಲು ಮತ್ತು ಸಾರ್ವಜನಿಕರಿಗೆ ಮುಂಚಿನ ಎಚ್ಚರಿಕೆ ಸಂದೇಶಗಳನ್ನು ಕಳುಹಿಸಲು ಸಹಾಯ ಮಾಡುತ್ತಿದೆ. ಮುಂದುವರೆದು, ವಿವಿಧ ವಿಭಾಗಗಳಿಂದ ಲಭ್ಯವಾಗುವ ಮಾಹಿತಿಯನ್ನು ರಿಯಲ್-ಟೈಮ್‌ನಲ್ಲಿ ಸಂಗ್ರಹಿಸಿ, ವಿಶ್ಲೇಷಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಹಾಗೂ ಕ್ಷೇತ್ರ ಮಟ್ಟದ ಚಟುವಟಿಕೆಗಳನ್ನು ಸಮನ್ವಯಗೊಳಿಸಲು, ಕೇಂದ್ರ ಸ್ಥಾನದಲ್ಲಿ **ಸಂಯೋಜಿತ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(ICCC)** ಹಾಗೂ **12** ವಿಭಾಗಗಳಲ್ಲಿ **ವಿಭಾಗೀಯ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(DCCC)** ಸ್ಥಾಪಿಸಲಾಗುತ್ತಿದೆ.<br><br>• ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಹುಲಿ, ಚಿರತೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ **"ಹೆಜ್ಜೆ"** ಎಂಬ ಡ್ಯಾಶ್ ಬೋರ್ಡ್ ನ್ನು ತಯಾರಿಸಲಾಗಿದೆ.<br><br>• ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು **Advance alert system** ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.<br><br>• ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್ ಗಳನ್ನು ಅಳವಡಿಸಲಾಗಿದೆ.<br><br>• ಸರ್ವೈಲೆನ್ಸ್ ಕ್ಯಾಮೆರಾಗಳ ಅಳವಡಿಕೆ: ಮಾನವ ವನ್ಯಜೀವಿ ಸಂಘರ್ಷ ಹೆಚ್ಚಾಗಿ ಕಂಡುಬರುವ ವನ್ಯಜೀವಿ ವಲಯಗಳ ಗಡಿರೇಖೆಗಳಲ್ಲಿ ಎಲ್ಲೆಲ್ಲಿ ನೆಟ್ ವರ್ಕ್ ನ ಸಂಪರ್ಕವಿರುವುದು ಅಲ್ಲಿ Real time Surveillance GSM ಆಧಾರಿತ Camera with AI based Software ನ್ನು ಅಳವಡಿಸಿ, ಸದರಿ ಮಾಹಿತಿಯನ್ನಾಧರಿಸಿ ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣದ ನಿರ್ವಹಣೆಯನ್ನು ಮಾಡಲಾಗುತ್ತಿದೆ.<br>• ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "**AI**" Based Camera ಗಳನ್ನು ಅಳವಡಿಸಲಾಗಿದ್ದು, |

| | | |
|---|---|---|
| | | ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br>• **ಥರ್ಮಲ್ ಡ್ರೋನ್‌ಗಳ** ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ. |

**ಸಂಖ್ಯೆ: ಎಫ್‌ಇಇ 231 ಎಫ್‌ಎನ್‌ಜಿ 2026**

**(ರಾಮಲಿಂಗಾರೆಡ್ಡಿ)**
**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು.**